# ಕರ್ನಾಟಕ ಸರ್ಕಾರ

## ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು – 560001

ಸಂಖ್ಯೆ: ಶಿ.ವ.ಕೋಶ.ಸಾ.ವ/01/22-23 ದಿನಾಂಕ : 08-06-2023

**ತಿದ್ದುಪಡಿ ಅಧಿಸೂಚನೆ**

ವಿಷಯ: 2022-23ನೇ ಸಾಲಿನ ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರು ಒಳಗೊಂಡಂತೆ ಪ್ರಾಥಮಿಕ ಶಾಲಾ ಶಿಕ್ಷಕ ಮತ್ತು ಪ್ರೌಢಶಾಲಾ ಶಿಕ್ಷಕರು / ತತ್ಸಮಾನ ವೃಂದದ ಶಿಕ್ಷಕರು ಹಾಗೂ ಸರ್ಕಾರಿ ಪ್ರೌಢ ಶಾಲಾ ಮುಖ್ಯ ಶಿಕ್ಷಕರು / ತತ್ಸಮಾನ ವೃಂದದ ಅಧಿಕಾರಿಗಳ ಸಾಮಾನ್ಯ ವರ್ಗಾವಣೆಗಳನ್ನು ಹಮ್ಮಿಕೊಳ್ಳುವ ಬಗ್ಗೆ - ತಿದ್ದುಪಡಿ

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ : ಸಂವ್ಯಾಶಾಇ 12 ಶಾಸನ 2020 ಬೆಂಗಳೂರು ದಿನಾಂಕ : 27.03.2020
2. ಸರ್ಕಾರದ ಅಧಿಸೂಚನೆ ಸಂಖ್ಯೆ : ಇಪಿ 08 ಇಟಿಆರ್ 2020 ದಿನಾಂಕ : 22.07.2020
3. ಈ ಕಛೇರಿಯ ವರ್ಗಾವಣಾ ಅಧಿಸೂಚನೆ ಸಂಖ್ಯೆ: ಶಿ.ವ. ಕೋಶ. ಸಾ.ವ/ 01/22-23 ದಿನಾಂಕ :26.12.2022
4. ಸರ್ಕಾರದ ಪತ್ರ ಸಂಖ್ಯೆ : ಇಪಿ 03 ಇಟಿಆರ್ 2023 ದಿನಾಂಕ : 25.01.2023
5. ಸರ್ಕಾರದ ಪತ್ರ ಸಂಖ್ಯೆ : ಇಪಿ 03 ಇಟಿಆರ್ 2023 ದಿನಾಂಕ : 31.05.2023
6. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು ಶಿಕ್ಷಕರ ವರ್ಗಾವಣಾ ತಿದ್ದುಪಡಿ ಕಾಯ್ದೆ -2022 ಸಂಖ್ಯೆ : ಸಂವ್ಯಾಶಾ ಇ 23 ಶಾಸನ 2022 ದಿನಾಂಕ : 13.10.2022
7. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ನಿಯಮ-2022 ಸರ್ಕಾರದ ಅಧಿಸೂಚಣೆ ಸಂಖ್ಯೆ : ಇಪಿ 91 ಇಟಿಆರ್ 2022 ದಿನಾಂಕ : 26.12.2022
8. ಈ ಕಚೇರಿಯ ಪರಿಷ್ಕೃತ ವರ್ಗಾವಣಾ ವೇಳಾಪಟ್ಟಿ ಸಂಖ್ಯೆ: ಶಿ.ವ.ಕೋಶ.ಸಾ.ವ/01/22-23 ದಿನಾಂಕ : 02.06.2023

**********

ಉಲ್ಲೇಖ (3) ರಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಮಂಜೂರಾದ ಶಿಕ್ಷಕರ ಹುದ್ದೆಗಳು, ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು, ಖಾಲಿ ಹುದ್ದೆಗಳ ವರ್ಗಾವಣಾ ಸಂಬಂಧ ದಿನಾಂಕ : 26.12.2022 ರಂದು ವರ್ಗಾವಣಾ ಅಧಿಸೂಚನೆ ಹೊರಡಿಸಲಾಗಿತ್ತು. ಕಾರಣಾಂತರಗಳಿಂದ ಸದರಿ ಪ್ರಕ್ರಿಯೆಗಳನ್ನು ಸರ್ಕಾರವು ಉಲ್ಲೇಖ (4) ರಂತೆ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ತಡೆಹಿಡಿದು, ಆ ದಿನದ ಎಲ್ಲಾ ಪ್ರಕ್ರಿಯೆಯನ್ನು ರದ್ದುಪಡಿಸುವಂತೆ ಸೂಚಿಸಲಾಗಿತ್ತು. ಉಲ್ಲೇಖ (5) ರನ್ವಯ ಸರ್ಕಾರವು ವರ್ಗಾವಣಾ ಪ್ರಕ್ರಿಯೆಯನ್ನು ಪುನಃ ಮುಂದುವರೆಸಲು ಅನುಮತಿಸಿದ್ದು, ಸುಮಾರು ಐದು ತಿಂಗಳ ಅವಧಿಯಲ್ಲಿ ಬದಲಾದ ಸನ್ನಿವೇಶಗಳಿಗೆ ಅನುಗುಣವಾಗಿ ಈ ತಿದ್ದುಪಡಿ ಆದೇಶ ಹೊರಡಿಸಲಾಗಿದೆ.

| ಪುಟ ಸಂಖ್ಯೆ | ದಿನಾಂಕ 26-12-2022 ರ ಅಧಿಸೂಚನೆಯಲ್ಲಿರುವಂತೆ | ತಿದ್ದುಪಡಿ |
|---|---|---|
| 3 | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಮಂಜೂರಾದ ಹುದ್ದೆಗಳು, ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ಹಾಗೂ ಖಾಲಿ ಹುದ್ದೆಗಳ ಮಾಹಿತಿಯನ್ನು ಪರಿಶೀಲಿಸಿ ಇಂದೀಕರಿಸಿದಂತೆ ಅಧಿಸೂಚನೆ ಹೊರಡಿಸಿದ ದಿನಾಂಕದಲ್ಲಿದ್ದಂತೆ ಸಂಬಂಧಿಸಿದ ಅಧಿಕಾರಿಗಳು ಖಚಿತಪಡಿಸಿದ ಖಾಲಿ ಹುದ್ದೆಗಳನ್ನು ಮಾತ್ರ ವರ್ಗಾವಣೆ ಪ್ರಕ್ರಿಯೆಗೆ ಪರಿಗಣಿಸಲಾಗುವುದು. ನಂತರದಲ್ಲಿ ಉದ್ಭವಿಸುವ ಖಾಲಿ ಹುದ್ದೆಗಳನ್ನು ಗುರುತಿಸಲು ತಂತ್ರಾಂಶದಲ್ಲಿ ಅವಕಾಶವಿರುವುದಿಲ್ಲ ಎಂದು ಸ್ಪಷ್ಟಪಡಿಸಿದೆ. | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಮಂಜೂರಾದ ಹುದ್ದೆಗಳು, ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು, ಖಾಲಿ ಹುದ್ದೆಗಳ ಮಾಹಿತಿ ಮತ್ತು ಕರ್ನಾಟಕ ನಾಗರಿಕ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಕಾಯ್ದೆ ಮತ್ತು ನಿಯಮ 2020 ರ ಕಲಂ 10(1) ರ ಅನುಸಾರ ಆದ್ಯತೆ ಮತ್ತು ವಿನಾಯಿತಿಗಳನ್ನು ದಿನಾಂಕ : 31.05.2023 ರಲ್ಲಿ ಇದ್ದಂತೆ ಸಂಬಂಧಿಸಿದ ಪ್ರಾಧಿಕಾರಿಗಳು ತಂತ್ರಾಂಶದಲ್ಲಿ ಇಂದೀಕರಿಸಿ ಖಚಿತಪಡಿಸಿದಂತೆ ಪರಿಗಣಿಸಲಾಗುವುದು. |
| 14 | 3(ಅ) ವರ್ಗಾವಣೆ ಅಧಿಸೂಚನೆ ದಿನಾಂಕಕ್ಕೆ ಗರಿಷ್ಟ 5 ವರ್ಷ ಅವಧಿ ಪೂರ್ಣಗೊಂಡು / 3 ವರ್ಷ ಮೇಲ್ಪಟ್ಟು 5 ವರ್ಷದೊಳಗಿನ ಅವಧಿಯಲ್ಲಿ ನಿರ್ದಿಷ್ಟಪಡಿಸಿದ ಹುದ್ದೆಗಳಲ್ಲಿ ಮತ್ತು ತಾಂತ್ರಿಕ ಸಹಾಯಕರ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ 02 ಪ್ರತ್ಯೇಕ ಪಟ್ಟಿ ಪ್ರಕಟಣೆ | ದಿನಾಂಕ : 31.05.2023 ಕ್ಕೆ ಗರಿಷ್ಠ 5 ವರ್ಷ ಅವಧಿ ಪೂರ್ಣಗೊಂಡು / 3 ವರ್ಷ ಮೇಲ್ಪಟ್ಟು 5 ವರ್ಷದೊಳಗಿನ ಅವಧಿಯಲ್ಲಿ ನಿರ್ದಿಷ್ಟಪಡಿಸಿದ ಹುದ್ದೆಗಳಲ್ಲಿ ಮತ್ತು ತಾಂತ್ರಿಕ ಸಹಾಯಕರ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಪಟ್ಟಿ ಪ್ರಕಟಣೆ |

ಬಿ.ಬಿ. ಕಾವೇರಿ, ಭಾ.ಆ.ಸೇ.,
ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ,
ಬೆಂಗಳೂರು

**ಇವರಿಗೆ ಅಗತ್ಯ ಕ್ರಮಕ್ಕಾಗಿ,**
1. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರು ರವರುಗಳಿಗೆ
2. ಜಂಟಿ ನಿರ್ದೇಶಕರು (ಆಡಳಿತ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
3. ಸಹ ನಿರ್ದೇಶಕರು, ಬೆಂಗಳೂರು/ಮೈಸೂರು/ಅಪರ ಆಯುಕ್ತರ ಕಛೇರಿ ಗುಲ್ಬರ್ಗಾ/ಧಾರವಾಡ

4. ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ಮೈಸೂರು/ಬೆಳಗಾವಿ/ಕಲಬುರಗಿ
5. ಶಾಲಾ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ)
6. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರು (ಆಡಳಿತ) ರವರ ಮೂಲಕ)

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ರವರ ಆದ್ಯ ಅವಗಾಹನೆಗಾಗಿ.
2. ಆಪ್ತ ಕಾರ್ಯದರ್ಶಿಯವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ರಾಜ್ಯ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ ಮಾಹಿತಿಗಾಗಿ ಕಳುಹಿಸಿದೆ.
5. ಆಪ್ತ ಕಾರ್ಯದರ್ಶಿಯವರು, ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ/ಧಾರವಾಡ.
7. ಶಾಲಾ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ
8. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಣೆಗಾಗಿ
9. ಕಚೇರಿ ಪ್ರತಿ